# ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:144 RNI NO.KAR KAN/2003/10452:No./PMG/KA/NK/BM/743/24-26 ಶನಿವಾರ ದಿನಾಂಕ: 04-05-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಲೋಕಸಭೆ ಚುನಾವಣಾ ಜಾಹೀರಾತು–ಪೂರ್ವಾನುಮತಿ

# ಕಡ್ಡಾಯ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ.ಮೇ.03: ಲೋಕಸಭೆ ಚುನಾವಣೆ–2024 ಅಂಗವಾಗಿ ಮೇ 7, 2024ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 6 ಹಾಗೂ 7 ರಂದು ಅಭ್ಯರ್ಥಿಗಳು/ ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಗದಿತ ಅರ್ಜಿ ನಮೂನೆಯಲ್ಲಿ ಮೇ 4 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.ಪೂರ್ವಾನುಮತಿಗೆ ಅರ್ಜಿ ಲಭ್ಯ: ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಅಗತ್ಯವಿರುವ ನಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ– ಈ ಕಚೇರಿಯಿಂದ ಪಡೆಯಬಹುದು.ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

## ಮಾಜಿ ಎಂ.ಎಲ್. ಸಿ. ವಿವೇಕ್ ರಾವ್ ಪಾಟೀಲ್ ಇಂದು ಬಿಜೆಪಿಗೆ ಸೇರ್ಪಡೆ



ಬೆಳಗಾವಿ– ಪ್ರತಾಪ್ ರಾವ್ ಪಾಟೀಲ್ ಚಿಕ್ಕೋಡಿ ಅಭ್ಯರ್ಥಿಗೆ ಬಹಿರಂಗವಾಗಿ ಬೆಂಬಲ ಸೂಚಿಸಿದ ಬೆನ್ನಲ್ಲಿಯೇ ನರೀಕ್ಷೆಯಂತೆ ಇಂದು ಹುಕ್ಕೇರಿಯಲ್ಲಿ ಅಮೀತ್ ಶಾ ಅವರ ಸಮ್ಮುಖದಲ್ಲಿ ಮಾಜಿ ಎಂಎಲ್ಸಿ ವಿವೇಕ್ ರಾವ್ ಪಾಟೀಲ ಬಿಜೆಪಿಗೆ ಸೇರ್ಪಡೆ ಆಗಲಿದ್ದಾರೆ ಎಂದು ಬಿಜೆಪಿ ಮೂಲಗಳಿಂದ ತಿಳಿದು ಬಂದಿದೆ.
ಇಂದು ಹುಕ್ಕೇರಿಯಲ್ಲಿ ನಡೆಯುಲಿರುವ ಬಿಜೆಪಿ ಸಮಾವೇಶದಲ್ಲಿ ಮಾಜಿ ವಿಧಾನ ಪರಿಷತ್ತಿನ ಸದಸ್ಯ ವಿವೇಕ್ ರಾವ್ ಬಿಜೆಪಿ ಸೇರ್ಪಡೆಯಾಗಲು ರೆಡಿಯಾಗಿದ್ದಾರೆ ಎಂದು ತಿಳಿದು ಬಂದಿದೆ.
ವಿವೇಕ್ ರಾವ್ ಪಾಟೀಲ ಅವರು ಇತ್ತೀಚಿಗೆ ಬಿಜೆಪಿಗೆ ಬೆಂಬಲ ಸೂಚಿಸಿದ ಬಳಿಕ ವಿವೇಕ್ ರಾವ್ ಪಾಟೀಲ ಅವರೂ ಕೂಡಾ ಬಿಜೆಪಿಗೆ ಸೇರ್ಪಡೆಯಾಗುವದು ಖಚಿತವಾಗಿತ್ತು. ಇಂದು ನರೀಕ್ಷೆಯಂತೆ ವಿವೇಕ್ ರಾವ್ ಪಾಟೀಲ ಸಹ ಬಿಜೆಪಿಗೆ ಸೇರ್ಪಡೆ ಆಗ್ತಾರೆ ಎಂದು ತಿಳಿದು ಬಂದಿದೆ.

## ಮಾಜಿ ಕಮೀಷನರ್ ಹಾಗೂ ಬೆಳಗಾವಿ ಮಾಜಿ ಐಜಿಪಿ ಭಾಸ್ಕರ್‌ರಾವ್ ಕಾರ್ ಅಪಘಾತ



ಬೆಂಗಳೂರು: ಕಳೆದ ವರ್ಷವಷ್ಟೇ ತನ್ನ ಐಪಿಎಸ್? ಸೇವೆಗೆ ರಾಜೀನಾಮೆ ನೀಡಿ ರಾಜಕೀಯಕ್ಕೆ ಎಂಟ್ರಿ ಕೊಟ್ಟಿದ್ದ, ಬೆಂಗಳೂರು ಮಾಜಿ ಕಮೀಷನರ್? ಭಾಸ್ಕರ್? ರಾವ್ ಅವರ ಕಾರು ಭೀಕರವಾಗಿ ಅಪಘಾತಕ್ಕೀಡಾಗಿದೆ.
ಆಂಧ್ರ ಪ್ರದೇಶದ ಅನಂತಪುರ ಕದ್ರಿಗೆ ಹೋಗುವ ಮಾರ್ಗ ಮಧ್ಯದಲ್ಲಿ ಈ ಭೀಕರ ಅಪಘಾತ ಸಂಭವಿಸಿದೆ. ಈ ಬಗ್ಗೆ ಖುದ್ದು ಭಾಸ್ಕರ್? ರಾವ್? ಅವರೇ ಟ್ವೀಟ್? ಮಾಡುವ ಮೂಲಕ ಮಾಹಿತಿಯನ್ನು ಹಂಚಿಕೊಂಡಿದ್ದಾರೆ. ಇನ್ನು, ಅಪಘಾತಕ್ಕೀಡಾದ ಇನ್ನೋವಾ ಕಾರಿನಲ್ಲಿ ಭಾಸ್ಕರ್? ರಾವ್ ?ಸೇರಿದಂತೆ ನಾಲ್ವರು ಪ್ರಯಾಣಿಸುತ್ತಿದ್ದರು. ಈ ಅಪಘಾತದಲ್ಲಿ ಪೈಕಿ ವೆಂಕಿ ಎಂಬುವವರಿಗೆ ಗಂಭೀರ ಗಾಯಗಳಾಗಿವೆ. ಆ ಕೂಡಲೇ ಅವರನ್ನು ಐಸಿಯುಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಉಳಿದ ಮೂವರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು, ಸೀಟ್? ಬೆಲ್ಟ್??? ಮತ್ತು ಏರ್ ಬ್ಯಾಗ್? ನಮ್ಮನ್ನು ಉಳಿಸಿದೆ ಎಂದು ಭಾಸ್ಕರ್? ರಾವ್? ಮಾಹಿತಿ ನೀಡಿದ್ದಾರೆ

## ಹಿಂದೂ ಕಾರ್ಯಕರ್ತರಿಗೆ ಭಿಕ್ಷುಕ ಎಂದ ಕಾಗವಾಡ ಕಾಂಗ್ರೆಸ್ ಶಾಸಕ ಕಾಗೆ



ಬೆಳಗಾವಿ ಚಿಕ್ಕೋಡಿ : ಪ್ರಧಾನ ನರೇಂದ್ರ ಮೋದಿ ಸಾವಿನ ಕುರಿತು ಹೇಳಿಕೆ ನೀಡಿ ವಿವಾದ ಸೃಷ್ಟಿಸಿದ್ದ ಕಾಂಗ್ರೆಸ್ ಶಾಸಕ ರಾಜು ಕಾಗೆ ಈಗ ಹಿಂದು ಕಾರ್ಯಕರ್ತರಿಗೆ ಬಿಕಾರ್ ಚೋಟ್ ? ಭಿಕ್ಷುಕ ಪದ ಬಳಕೆ ಮಾಡಿದ್ದಾರೆ.
ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಪರ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡುವ ಸಂದರ್ಭದಲ್ಲಿ ಹಿಂದೂ ಕಾರ್ಯಕರ್ತರಿಗೆ ಭಿಕ್ಷುಕ ಪದ ಬಳಕೆ ಮಾಡಿದ್ದಾರೆ. ಕಳೆದ ಮೂರು ದಿನಗ ಳಿಂದ ವಿವಾದಾತ್ಮಕ ಹೇಳಿಕೆಯಿಂದಲೇ ಶಾಸಕ ರಾಜು ಕಾಗೆ ಗಮನಸೆಳೆದಿದ್ದಾರೆ.ಮೊನ್ನೆಯಷ್ಟೇ ಕಾಂಗ್ರೆಸ್ ಗೆ ಮತ ನೀಡದಿದ್ದರೆ ವಿದ್ಯುತ್ ಕಡಿತ ಮಾಡುವುದಾಗಿ ಹೇಳಿಕೆ ನೀಡಿದ್ದರು. ಈ ಹೇಳಕೆಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡುವಂತೆ ನೋಟಿಸ್ ನೀಡಿತ್ತು. ಇದಾದ ಬೆನ್ನಲ್ಲೇ ಈಗ ಮತ್ತೊಂದು ಹೇಳಿಕೆ ನೀಡುವ ಮೂಲಕ ಕಾಂಗ್ರೆಸ್ ಅನ್ನು ಇಕ್ಕಟ್ಟಿಗೆ ಸಿಲುಕಿಸಿದ್ದಾರೆ.

### ಲೋಕಸಭಾ ಚುನಾವಣೆ: ಮೇ.7ರಂದು ಮತಕೇತ್ರದ ವ್ಯಾಪ್ತಿಯಲ್ಲಿ ಸಂತೆ–ಜಾತ್ರೆ ನಿಷೇಧ

ಬೆಳಗಾವಿ.ಮೇ.03: ಸಾರ್ವತ್ರಿಕ ಲೋಕಸಭಾ–2024 ಮೇ.7 ರಂದು ಮತದಾನ ನಡೆಯಲಿದ್ದು, ಮತದಾನ ದಿನದಂದು ಬೆಳಗಾವಿ ಜಿಲ್ಲೆಯಾದ್ಯಂತ 01 ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ, 02 ಬೆಳಗಾವಿ ಲೋಕಸಭಾ ಮತಕ್ಷೇತ್ರ ಹಾಗೂ 12 ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದ ಚನ್ನಮ್ಮನ ಕಿತ್ತೂರು ಮತ್ತು ಖಾನಾಪೂರ ತಾಲೂಕಿನ ವ್ಯಾಪ್ತಿಯಲ್ಲಿ ನಡೆಯುವ ಸಂತೆ ಜಾತ್ರೆಯನ್ನು ನಷೇಧಿಸಿ ಜಿಲ್ಲಾ ಚುನಾವಣಾಧಿ ಕಾರಿಗಳಾದ ನತೇಶ್ ಪಾಟೀಲ ಅವರು ಆದೇಶವನ್ನು ಹೊರಡಿಸಿದ್ದಾರೆ.

## ಮತದಾನ ದಿನ ನಿಯೋಜಿತ ಅಧಿಕಾರಿ ಸಿಬ್ಬಂದಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಿ ಬೇಜವಾಬ್ದಾರಿತನ, ಲೋಪಗಳು ಕಂಡುಬಂದಲ್ಲಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು: ರಾಹುಲ ಶಿಂಧೆ



ಚಿಕ್ಕೋಡಿ(ಮೇ.3): ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರಕ್ಕೆ ಮೇ. 7 ರಂದು ಮತದಾನ ಜರುಗಲಿದೆ. ಮತದಾನಕ್ಕೆ ಸಂಬಂಧಿಸಿದಂತೆ ಅಂಕಿ ಅಂಶಗಳ ವರದಿಯನ್ನು ಕಾಲಮಿತಿಯೊಳಗೆ ಸಲ್ಲಿಸುವುದು ಅತೀ ಮುಖ್ಯವಾಗಿದ್ದು ಈ ಕುರಿತು ನಿಯೋಜಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.ಚಿಕ್ಕೋಡಿ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ (ಮೇ.3)ರಂದು ಜರುಗಿದ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಮತದಾ ನದ ದಿನ ಮತದಾನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಅಂಕಿ ಅಂಶಗಳನ್ನು ಚುನಾವಣೆ ಆಯೋಗಕ್ಕೆ ನಿಗದಿತ ಸಮಯದೊಳಗಾಗಿ ಸಲ್ಲಿಸುವದು ಅತೀ ಅಗತ್ಯವಾಗಿರುತ್ತದೆ. ಈಗಾಗಲೇ ಅಂಕಿ ಅಂಶಗಳ ವರದಿ ಕ್ರೋಢಿಕರಣಕ್ಕಾಗಿ ನಿಯೋಜಿತ ಅಧಿಕಾರಿ ಗಳು ತಮ್ಮ ತಂಡಗಳೊಂದಿಗೆ ಆಯಾ ವಿಧಾನಸಭಾ ಮತಕ್ಷೇತ್ರದ ವರದಿಗಳನ್ನು ನಿಗದಿತ ಸಮಯದೊಳಗೆ ಸಲ್ಲಿಸಬೇಕು. ನೋಡೆಲ್ ಅಧಿಕಾರಿಗಳು ವರದಿ ನೀಡುವಾಗ ಅತೀ ಜಾಗರೂಕತೆಯಿಂದ ಹಾಗೂ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು. ನಿಯೋಜಿತ ನೋಡೆಲ್ ಅಧಿಕಾರಿಗಳು ತಮ್ಮ ವಿಧಾನ ಸಭಾ ಕ್ಷೇತ್ರದ ಅಧಿಕಾರಿ ಹಾಗೂ ತಂಡಗಳೊಂದಿಗೆ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು.ಅಂಕಿ ಅಂಶಗಳ ಕ್ರೋಢಿಕರಣದಲ್ಲಿ ತಮಗೆ ಬೇಕಾದ ಮಾಹಿತಿಯನ್ನು ಅಚ್ಚುಕಟ್ಟಾಗಿ,ವ್ಯವಸ್ಥಿತವಾಗಿ ಪಡೆದು ಕಾಲಮಿತಿಯೊಳಗೆ ಸಲ್ಲಿಸಬೇಕು.ಈ ಕಾರ್ಯದಲ್ಲಿ ಬೇಜವಾಬ್ದಾರಿತನ ತೋರುವ ಅಧಿಕಾರಿ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಚುನಾವಣೆಗೆ ಸಂಬಂಧಿಸಿದಂತೆ 48 ಗಂಟೆಗಳ ಮಾರ್ಗಸೂಚಿಗಳನ್ನು ಕಟ್ಟು ನಿಟ್ಟಾಗಿ ಪಾಲಿಸಬೇಕು. ಮತದಾನದ ದಿನದಂದು ವಿಧ್ಯುತ ವ್ಯತ್ಯಯವಾಗದಂತೆ ನಿಗಾವಹಿಸಲು ಹೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ವಿಧ್ಯುನ್ಮಾನ ಮತಯಂತ್ರಗಳಿರುವ ಸ್ಟ್ರಾಂಗ ರೂಂಗಳಿಗೆ ನಿರಂತರ ವಿಧ್ಯುತ ಸರಬರಾಜು ಆಗಬೇಕು. ಮತ ಏಣಿಕೆ ಪ್ರಕ್ರಿಯೆ ಪೂರ್ಣಗೊಳ್ಳುವ ವರೆಗೆ ಅಲ್ಲಿಯೇ ಸಿಬ್ಬಂದಿಗಳ ಖಾಯಂ ಆಗಿ ನಿಯೋಜಿಸುವಂತೆ ತಿಳಿಸಿದರು.ಮತದಾನದ ದಿನದಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಎಲ್ಲ ಮತಗಟ್ಟೆಗಳಿಗೆ ಕಡ್ಡಾಯವಾಗಿ ಒಬ್ಬ ಆಶಾ ಕಾರ್ಯಕರ್ತರು ಅಗತ್ಯದ ಔಷಧಿಗಳೊಂದಿಗೆ ಹಾಜರಿರಬೇಕು. ಇದರ ಜೊತೆಗೆ ಮಸ್ಟರಿಂಗ ಹಾಗೂ ಡಿ ಮಸ್ಟರಿಂಗ ಕೇಂದ್ರಗಳಲ್ಲಿ ಅಗತ್ಯದ ಅಂಬ್ಯುಲೆನ್ಸ ವ್ಯವಸ್ಥೆ ಮಾಡಬೇಕು. ಮತಗಟ್ಟೆ ಅಧಿಕಾರಿ ಸಿಬ್ಬಂದಿಗಳಿಗೆ ಮತಗಟ್ಟೆಗಳಿಗೆ ತೆರಳಲು ಅಗತ್ಯದ ಬಸ ಸೌಲಭ್ಯಗಳನ್ನು ಒದಗಿಸಬೇಕು. ಒಟ್ಟಾರೆಯಾಗಿ ಮತದಾನದ ದಿನದಂದು ಯಾವುದೇ ಲೋಪಗಳಿಗೆ ಆಸ್ಪದ ನೀಡದಂತೆ ತಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಅವರು ನೋಡೆಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.ಸಭೆಯಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಕಚೇರಿಯ ಸಹಾಯಕ ಚುನಾವಣಾಧಿಕಾರಿ ಬಸವರಾಜ ಅಡವಿಮಠ, ಜಿ.ಪಂ. ಯೋಜನಾ ನಿರ್ದೇಶಕ ಗಂಗಾಧರ ದಿವಟರ ಸೇರಿದಂತೆ ವಿವಿಧ ಸಮಿತಿಗಳ ನೋಡೆಲ್ ಅಧಿಕಾರಿಗಳು ಹಾಜರಿದ್ದರು.

## ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಿಸಿದ ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ, ಮೇ 3–ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮೇ 7 ರಂದು ಮತದಾನ ನಡೆಯುವ ಹಿನ್ನೆಲೆಯಲ್ಲಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನಗರದಲ್ಲಿ ಮನೆ ಮನೆಗೆ ತೆರಳಿ ಮತದಾರರ ಚೀಟಿ ವಿತರಿಸಿದರು.

ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಗೊಂಧಳಿ ಗಲ್ಲಿಯ ಮನೆಗಳಿಗೆ ಶುಕ್ರವಾರ(ಮೇ 3) ಭೇಟಿ ನೀಡಿ ಮತದಾರರ ಚೀಟಿಗಳನ್ನು ವಿತರಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾದಿಕಾರಿ ನಿತೇಶ್ ಪಾಟೀಲ ಅವರು, ಮತದಾರರು ತಮ್ಮ ಹೆಸರಿರುವ ಮತಗಟ್ಟೆಗಳನ್ನು ಗುರುತಿಸಲು ಮತದಾರರ ಚೀಟಿಯಿಂದ ಅನುಕೂಲವಾಗಲಿದೆ.ಮತಗಟ್ಟೆಗಳ ಬಗ್ಗೆ ಖಚಿತ ಮಾಹಿತಿ ಲಭಿಸುವುದರಿಂದ ಮತದಾನದ ದಿನದಂದು ಮತಗಟ್ಟೆ ಹುಡುಕುವ ಗೊಂದಲ ಇರುವುದಿಲ್ಲ ಎಂದರು. ಮತದಾರರಿಗೆ ಅನುಕೂಲ ಕಲ್ಪಿಸುವುದರ ಜತೆಗೆ ಮತದಾನ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಆಯಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬಿ.ಎಲ್.ಓ. ಗಳು ಮನೆ ಮನೆಗಳಿಗೆ ತೆರಳಿ ಮತದಾರರ ಚೀಟಿಗಳನ್ನು ವಿತರಿಸಲಿದ್ದಾರೆ. ಸಾರ್ವಜನಿಕರು ಮತದಾರರ ಚೀಟಿಗಳನ್ನು ಪಡೆದುಕೊಂಡು ನಿಗದಿತ ಮತಗಟ್ಟೆಗಳಿಗೆ ತೆರಳಿ ತಪ್ಪದೇ ತಮ್ಮ ಅಮೂಲ್ಯ ಮತವನ್ನು ಚಲಾಯಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮನವಿ ಮಾಡಿಕೊಂಡರು. ಪ್ರೊಬೇಷನರಿ ಐ.ಎ..ಎಸ್. ಅಧಿಕಾರಿ ಶುಭಂ ಶುಕ್ಲಾ, ಬೆಳಗಾವಿ ಉತ್ತರ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಯೂ ಆಗಿರುವ ಮಹಾನಗರ ಪಾಲಿಕೆ ಆಯುಕ್ತ ಪಿ.ಎನ್. ಲೋಕೇಶ್ ಮತ್ತಿತರರು ಉಪಸ್ಥಿತರಿದ್ದರು.

## ವಿವಿಧೆಡೆ ದಾಳಿ, ಮದ್ಯ ವಶ

ಬಳ್ಳಾರಿ,ಮೇ 03:ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಅಬಕಾರಿ ಪೊಲೀಸ್ ಅಧಿಕಾರಿಗಳಿಂದ ವಿವಿಧೆಡೆ ದಾಳಿ ನಡೆಸಿ ಮದ್ಯ ವಶಪ ಡಿಕೊಂಡು 03 ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಎನ್.ಮಂಜುನಾಥ ಅವರು ತಿಳಿಸಿದ್ದಾರೆ.ಕುರುಗೋಡು ತಾಲ್ಲೂಕಿನ ಕೋಳೂರು ಕ್ರಾಸ್‌ನಂದ ಸಿರುಗುಪ್ಪ ಕಡೆ ಹೋಗುವ ರಸ್ತೆಯಲ್ಲಿ ರಸ್ತೆಗಾವಲು ವೇಳೆ ದ್ವಿಚಕ್ರ ವಾಹನದಲ್ಲಿ 17.280 ಲೀ. (ಅಂದಾಜು ಮೌಲ್ಯ ರೂ.66962) ಮದ್ಯ ಸಾಗಾಣಿಕೆ ಮಾಡುತಿರುವುದನ್ನು ಪತ್ತೆಹಚ್ಚಿ, ವಶಕ್ಕೆ ಪಡೆದು ಪ್ರಕರಣ ದಾಖಲಿಸಿದೆ.ಸಂಡೂರು ತಾಲ್ಲೂಕಿನ ಬೊಮ್ಮಘಟ್ಟ ಗ್ರಾಮದಿಂದ ಡಿ.ಗೊಲ್ಲರಹಟ್ಟಿ ಗ್ರಾಮಕ್ಕೆ ಹೋಗುವ ರಸ್ತೆಯ ಗೊಲ್ಲರಹಟ್ಟಿ ಕ್ರಾಸ್ ಹತ್ತಿರ ರಸ್ತೆಗಾವಲು ಮಾಡುತ್ತಿರುವ ವೇಳೆ ದ್ವಿಚಕ್ರ ವಾಹನದಲ್ಲಿ 25.920 ಲೀ. (ಅಂದಾಜು ಮೌಲ್ಯ ರೂ.41520) ಮದ್ಯವನ್ನು ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.ಸಿರುಗುಪ್ಪ ತಾಲ್ಲೂಕಿನ ವೆಂಕಟಾಪುರ ಗ್ರಾಮದಿಂದ ನಾಗರಹಾಳು ಗ್ರಾಮಕ್ಕೆ ಹೋಗುವ ಮಾರ್ಗ ಮಧ್ಯದ ವೆಂಕಟಾಪುರ ರುದ್ರಭೂಮಿ ಹತ್ತಿರ ರಸ್ತೆಗಾವಲು ಸಂದರ್ಭದಲ್ಲಿ ದ್ವಿಚಕ್ರ ವಾಹನದಲ್ಲಿ 51.840 ಲೀ. (ಅಂದಾಜು ಮೌಲ್ಯ ರೂ.63045) ಮದ್ಯ ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ಮದ್ಯ ಹಾಗೂ ವಾಹನವನ್ನು ಜಪ್ತುಪಡಿಸಿ, ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವೀಪ್ ಕಾರ್ಯಕ್ರಮದಡಿ ಬೈಕ್ ರ್‍ಯಾಲಿ: ಪೂರ್ವಭಾವಿ ಸಭೆ

# ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಬೈಕ್ ರ್‍ಯಾಲಿಯಲ್ಲಿ ಭಾಗವಹಿಸಿ: ಸಿಇಒ



ಕೊಪ್ಪಳ, ಮೇ 03 : ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ರ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಸ್ವೀಪ್ ಕಾರ್ಯಕ್ರಮದಡಿ ಮೇ 04 ರಂದು ಬೈಕ್ ರ್‍ಯಾಲಿಯನ್ನು ಆಯೋಜಿಸಿದ್ದು, ಈ ಕಾರ್ಯ ಕ್ರಮಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮ್ಮ ಸಿಬ್ಬಂದಿಯೊಂದಿಗೆ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಹೇಳಿದರು.ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಸ್ವೀಪ್ ಕಾರ್ಯಕ್ರಮದಡಿ ಆಯೋಜಿಸಿರುವ ಬೈಕ್ ರ್‍ಯಾಲಿ ಕಾರ್ಯಕ್ರಮದ ಕುರಿತು ಚರ್ಚಿಸಲು ಶುಕ್ರವಾರದಂದು ಜಿಲ್ಲಾ ಪಂಚಾಯತಿಯ ಸ್ಥಾಯಿ ಸಮಿತಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮೇ 07 ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿದ್ದು, ಇದರ ಅಂಗವಾಗಿ ಮತದಾರರಲ್ಲಿ ಮತದಾನದ ಕುರಿತು ಜಾಗೃತಿ ಮೂಡಿಸಲು ಮೇ 04 ರಂದು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಬೈಕ್ ರ್‍ಯಾಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 09 ಗಂಟೆಗೆ ಬೈಕ್ ರ್‍ಯಾಲಿಯು ನಗರದ ತಾಲ್ಲೂಕು ಕ್ರೀಡಾಂಗಣದಿಂದ ಆರಂಭಗೊಂಡು ಅಶೋಕ ಸರ್ಕಲ್ ಮೂಲಕ ಬಸ್‌ಸ್ಟ್ಯಾಂಡ್ ಮಾರ್ಗವಾಗಿ ಭಾಗ್ಯನಗರ (2 ನೇ ಪುಟಕ್ಕೆ)

## ಹಲಕುಂದಿ ಗ್ರಾಮದಲ್ಲಿ ಮತದಾನ ಜಾಗೃತಿ

# ಪ್ರತಿಯೊಬ್ಬರು ವಿವೇಚನೆಯಿಂದ ಮತ ಚಲಾಯಿಸಿ: ಜಿಪಂ ಸಿಇಒ




ಬಳ್ಳಾರಿ,ಮೇ 03:ಮೇ 07 ರಂದು ನಡೆಯುವ ಲೋಕಸಭೆ ಚುನಾವಣೆಗೆ ಪ್ರತಿಯೊಬ್ಬರೂ ವಿವೇಚನೆ ಯಿಂದ ಮತ ಚಲಾಯಿಸಿ, ಉತ್ತಮ ನಾಯಕರನ್ನು ಆಯ್ಕೆ ಮಾಡಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಆದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬಳ್ಳಾರಿ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಇವರ ಆಶ್ರಯದಲ್ಲಿ ಹಲಕುಂದಿ ಗ್ರಾಮದ ಮನರೇಗಾ ಕಾರ್ಮಿಕರಿಗೆ ಶುಕ್ರವಾರ ಏರ್ಪಡಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮತದಾನ ಪ್ರತಿಯೊಬ್ಬ ಪ್ರಜೆಯ ಮೂಲ ಹಕ್ಕು. ಉತ್ತಮ ನಾಯಕನ ಆಯ್ಕೆ ಪ್ರತಿಯೊಬ್ಬ ಮತದಾರನ ಆದ್ಯ ಕರ್ತವ್ಯ. ನಮ್ಮ ಅಮೂಲ್ಯವಾದ ಮತವನ್ನು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗಿ ಮಾರಿಕೊಳ್ಳಬೇಡಿ ಎಂದರು. ಚುನಾವಣಾ ಹಬ್ಬವು, ಎಲ್ಲರ ಮನೆಯ ಹಬ್ಬವಿದ್ದಂತೆ. ಪ್ರತಿಯೊಬ್ಬರೂ ಪಾಲ್ಗೊಂಡು ಮತದಾನ ಮಾಡುವ ಮೂಲಕ ಶೇಕಡ ವಾರು ಮತದಾನ ಪ್ರಮಾಣ ಹೆಚ್ಚಳಕ್ಕೆ ಸಹಕರಿ ಸಬೇಕು ಎಂದು ಕರೆ ನೀಡಿದರು. (2 ನೇ ಪುಟಕ್ಕೆ)

## ವಿಕಲಚೇತನರ ವಿಶೇಷ ಮತಗಟ್ಟೆ ಪರಿಶೀಲನೆ

ಬೆಳಗಾವಿ.ಮೇ.03 ಸಾರ್ವತ್ರಿಕ ಲೋಕಸಭಾ ಚುನಾವಣೆ–2024 ರ ಪ್ರಯುಕ್ತ ಬೆಂಗಳೂರಿನ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ ರಾಜ್ಯ ಆಯುಕ್ತರು ದಾಸ್ ಸೂರ್ಯವಂಶಿ ಅವರು ಏ.29 ಮತ್ತು 30 ರಂದು ಬೆಳಗಾವಿ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಮತಗಟ್ಟೆಗಳನ್ನು ಪರಶೀಲಿಸಿದರು.

ವಿಕಲಚೇತನ ಮತದಾರರಿಗೆ ಮತದಾನ ಮಾಡಲು ಅನುಕೂಲವಾಗುವ ನಟ್ಟಿನಲ್ಲಿ ರಚಿಸಲಾಗಿರುವ ಬೆಳಗಾವಿ ಗ್ರಾಮೀಣ 131, ಬೆಳಗಾವಿ ಉತ್ತರ 38, ಬೆಳಗಾವಿ ದಕ್ಷಿಣ 08 ವಿಶೇಷ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬೆಳಗಾವಿ ಉತ್ತರ 38, ಬೆಳಗಾವಿ ದಕ್ಷಿಣ 08 ವಿಶೇಷ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.